ಇ) ಸರ್ಕಾರದಿಂದ ಬಡ್ತಿ ನೀಡಿದ ನೌಕರರು ಒಬ್ಬ ವ್ಯಕ್ತಿಗೆ 1 50 ಲಕ್ಷದಿಂದ 2 00 ಲಕ್ಷದವರೆಗೆ ಬಾಕಿ ಹಣ ಪಡೆದಿರುವುದು ನಿಜವೇ, ಇದರಿಂದ ಸರ್ಕಾರಕ್ಕೆ ಅನ್ಯಾಯವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ, ಹಾಗಿದ್ದಲ್ಲಿ, ಈ ಬಗ್ಗೆ ಯಾವ ಕ್ರಮ ಕೈಗೊಳ್ಳಲಾಗಿದೆ?

ಶ್ರೀ ಹೆಚ್ ಡಿ ಕುಮಾರ್‌ಸ್ವಾಮಿ (ಮುಖ್ಯಮಂತ್ರಿ)

ಅ) ಸರ್ಕಾರಿ ಆದೇಶ ಸಂಖ್ಯೆ ಡಿಪಿಎಆರ್ 2 ಎಸ್‌ಎಲ್‌ಸಿ 90 ದಿನಾಂಕ 6 8 90ರ ಪ್ರಕಾರ ದಿನಗೂಲಿ ನೌಕರರ ಸೇವೆಯನ್ನು ಸಕ್ರಮಗೊಳಿಸುವಾಗ ಖಾಲಿ ಹುದ್ದೆಗಳು ಲಭ್ಯವಿಲ್ಲದ ಪ್ರಕರಣದಲ್ಲಿ ಸೂಪರ್‌ನ್ಯೂಮರರಿ ಹುದ್ದೆಯನ್ನು ಸೃಜಿಸಿ ಸೇವೆಯಲ್ಲಿ ಸಕ್ರಮಗೊಳಿಸಲಾಗಿದೆ

ಆ) ಸೂಪರ್‌ನ್ಯೂಮರರಿ ಹುದ್ದೆಯಲ್ಲಿ ಸೇವೆ ಸಲ್ಲಿಸುತ್ತಿರುವ ನೌಕರರು ಬಡ್ತಿಗೆ ಅರ್ಹರಿರುವುದಿಲ್ಲ

ಇ) 'ಆ' ಪ್ರಶ್ನೆಗೆ ನೀಡಿದ ಉತ್ತರದಿಂದಾಗಿ ಇದು ಉದ್ಭವಿಸುವುದಿಲ್ಲ

1431 (1885) ಶ್ರೀ ಭರಮಗೌಡ (ರಾಜು) ಆಲಗೌಡ ಕಾಗೆ (ಕಾಗವಾಡ) – ಮಾನ್ಯ ಲೋಕೋಪಯೋಗಿ ಮತ್ತು ಇಂಧನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕಾಗವಾಡ ಮತ ಕ್ಷೇತ್ರದಲ್ಲಿ ಎರಡು ವರ್ಷಗಳಿಂದ ಮಹಾಪೂರದಿಂದ ಅಲ್ಲಿನ ರಸ್ತೆಗಳು ಹದಗೆಟ್ಟಿದ್ದು, ರಸ್ತೆಗಳ ದುರಸ್ತಿಗಾಗಿ ಎಷ್ಟು ಹಣ ನೀಡಲಾಗಿದೆ,

ಆ) ಕಾಗವಾಡ ಮತಕ್ಷೇತ್ರ ವ್ಯಾಪ್ತಿಯಲ್ಲಿ ಮೂರು ಸಕ್ಕರೆ ಕಾರ್ಖಾನೆಗಳಿದ್ದು, ಈ ರಸ್ತೆ ಹದಗೆಟ್ಟಿರುವುದರಿಂದ ಕಬ್ಬು ಸಾಗಾಣಿಕೆಗೆ ರೈತರಿಗೆ ತುಂಬಾ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ,

ಇ) ಹಾಗಿದ್ದಲ್ಲಿ, ಸದರಿ ರಸ್ತೆ ದುರಸ್ತಿಗಾಗಿ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು?

ಶ್ರೀ ಹೆಚ್ ಡಿ ರೇವಣ್ಣ (ಲೋಕೋಪಯೋಗಿ ಮತ್ತು ಇಂಧನ ಸಚಿವರು)

ಅ) 2005–06ನೇ ಸಾಲಿನಲ್ಲಿ ಕಾಗವಾಡ ಮತಕ್ಷೇತ್ರದಲ್ಲಿ ಒಟ್ಟು ರೂ 225 00 ಲಕ್ಷಗಳ ಅಂದಾಜು ಮೊತ್ತದ 20 ಕಾಮಗಾರಿಗಳಿಗೆ ರೂ 223 12 ಲಕ್ಷಗಳ ವೆಚ್ಚ ಭರಿಸಲಾಗಿರುತ್ತದೆ ಹಾಗೂ 2006–07ನೇ ಸಾಲಿನಲ್ಲಿ ರೂ 200 00 ಲಕ್ಷಗಳ ಅಂದಾಜು ಮೊತ್ತದ 1 ಕಾಮಗಾರಿಗೆ ರೂ 43 00 ಲಕ್ಷಗಳ ವೆಚ್ಚವನ್ನು ಭರಿಸಲಾಗಿರುತ್ತದೆ

ಆ) ಬಂದಿದೆ

ಇ) ಕಾಗವಾಡ ಮತಕ್ಷೇತ್ರ ವ್ಯಾಪ್ತಿಯಲ್ಲಿ ಮೂರು ಸಕ್ಕರೆ ಕಾರ್ಖಾನೆಗಳಿದ್ದು ಈ ರಸ್ತೆಗಳು ಹದಗೆಟ್ಟಿರುವುದರಿಂದ ಕಬ್ಬು ಸಾಗಾಣಿಕೆಗೆ ರೈತರಿಗೆ ತುಂಬಾ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದ್ದು, ಈ ರಸ್ತೆಗಳ ದುರಸ್ತಿಗಾಗಿ ಆಗಾಗ ಸರ್ಕಾರದಿಂದ ಹಣ ಬಿಡುಗಡೆಯಾಗುತ್ತಿರುತ್ತದೆ

1433 (1320) ಶ್ರೀ ದೇಶಪಾಂಡೆ ಅರ್ ವಿ (ಹಳಿಯಾಳ) – ಮಾನ್ಯ ಪ್ರವಾಸೋದ್ಯಮ ಮತ್ತು ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಉತ್ತರ ಕನ್ನಡ ಜಿಲ್ಲೆಯನ್ನು ಪ್ರವಾಸಿ ಕೇಂದ್ರವನ್ನಾಗಿ ಪರಿವರ್ತಿಸಲು ಹಾಗೂ ಮೂಲಭೂತ ಸೌಕರ್ಯಗಳನ್ನು ಅಭಿವೃದ್ಧಿಪಡಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು,

ಆ) ಉತ್ತರ ಕನ್ನಡದ ಅತಿ ರಮ್ಯ ಸ್ಥಳವಾದ ದಾಂಡೇಲಿ ವಿಭಾಗವನ್ನು ಪ್ರವಾಸಿ ಕೇಂದ್ರವನ್ನಾಗಿ ಪರಿವರ್ತಿಸಲು ಸರ್ಕಾರವು ವಿಶೇಷ ಕಾರ್ಯಕ್ರಮವನ್ನು ಹಮ್ಮಿಕೊಂಡಿದೆಯೆ,

ಇ) ಹಾಗಿದ್ದಲ್ಲಿ ವಿವರಗಳೇನು?

ಶ್ರೀ ಬಿ ಶ್ರೀರಾಮುಲು (ಪ್ರವಾಸೋದ್ಯಮ ಮತ್ತು ಮೂಲಸೌಲಭ್ಯ ಅಭಿವೃದ್ಧಿ ಸಚಿವರು)

ಅ) ಉತ್ತರ ಕನ್ನಡ ಜಿಲ್ಲೆಯ ಪ್ರಮುಖ ಪ್ರವಾಸಿ ಆಕರ್ಷಣೆಗಳನ್ನೊಂದಿರುವ ಜಿಲ್ಲೆಯಾಗಿರುತ್ತದೆ ಕರ್ನಾಟಕದ ಕಾಶ್ಮೀರ ಎಂದೇ ಪ್ರಸಿದ್ಧ ಪಡೆದ ಕಾರವಾರದ